ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ ಇಡಿ/ಕೆಇಎ/ನೇ.ವಿ/ಸಿಆರ್-15/2025-26 ದಿನಾಂಕ : 03.07.2026

## ಪ್ರಕಟಣೆ – ಅರ್ಜಿ ಸಲ್ಲಿಕೆ ದಿನಾಂಕ ವಿಸ್ತರಣೆ ಹಾಗೂ ಅರ್ಜಿ ತಿದ್ದುಪಡಿ

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ 05.06.2026 ರಂದು ಉಳಿಕೆ ಮೂಲಕ ವೃಂದ ಹಾಗೂ ಸ್ಥಳೀಯ ವೃಂದದ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಗೆ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ 03.07.2026 ರವರೆಗೆ ಕಾಲಾವಕಾಶ ನೀಡಲಾಗಿದ್ದು, ಶುಲ್ಕ ಪಾವತಿಸಲು ದಿನಾಂಕ 04.07.2026 ನ್ನು ಕೊನೆಯ ದಿನಾಂಕವನ್ನಾಗಿ ನಿಗದಿಗೊಳಿಸಿ ಅಧಿಸೂಚನೆ ಹೊರಡಿಸಲಾಗಿತ್ತು.

ಆದರೆ ಕೆಲವು ಅಭ್ಯರ್ಥಿಗಳು ಪ್ರಾಧಿಕಾರಕ್ಕೆ ಮನವಿಗಳನ್ನು ಸಲ್ಲಿಸಿ, ವಿವಿಧ ಕಾರಣಗಳಿಂದ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಲು ಸಾಧ್ಯವಾಗಿಲ್ಲ ಹಾಗೂ ಈಗಾಗಲೇ ಸಲ್ಲಿಸಿರುವ ಅರ್ಜಿಗಳಲ್ಲಿ ತಪ್ಪಾದ ಮಾಹಿತಿಗಳನ್ನು ನಮೂದಿಸಿದ ಹಿನ್ನಲೆಯಲ್ಲಿ ಅರ್ಜಿಯಲ್ಲಿನ ವಿವರಗಳನ್ನು ತಿದ್ದುಪಡಿ ಮಾಡಲು ಅವಕಾಶ ನೀಡುವಂತೆ ಕೋರಿರುತ್ತಾರೆ.

ಅನೇಕ ಅಭ್ಯರ್ಥಿಗಳ ಮನವಿಗಳನ್ನು ಪರಿಗಣಿಸಿ, ಅರ್ಹ ಅಭ್ಯರ್ಥಿಗಳಿಗೆ ಸಮಾನ ಅವಕಾಶ ಕಲ್ಪಿಸುವ ಉದ್ದೇಶದಿಂದ ಅರ್ಜಿ ಸಲ್ಲಿಕೆ ಹಾಗೂ ಅರ್ಜಿ ತಿದ್ದುಪಡಿ ವೇಳಾಪಟ್ಟಿಯನ್ನು ಈ ಕೆಳಗಿನಂತೆ ನಿಗದಿಪಡಿಸಿದೆ.

| ಕ್ರಮ ಸಂಖ್ಯೆ | ವಿಷಯ | ಸಮಯ |
|---|---|---|
| 1 | ಆನ್‌ಲೈನ್ ಅರ್ಜಿ ಸಲ್ಲಿಕೆ ಹಾಗೂ ಶುಲ್ಕಪಾವತಿ ಕೊನೆಯ ದಿನಾಂಕ | 08.07.2026 ಸಂಜೆ-4.00 ವರೆಗೆ |
| 2 | ಅರ್ಜಿ ತಿದ್ದುಪಡಿ (Application Edit/Correction) ಮಾಡಲು | 10.07.2026 ರಿಂದ 13.07.2026 ವರೆಗೆ |

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in